# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ತಾಲ್ಲೂಕು ಪಂಚಾಯತ್‌ಗಳ ವ್ಯಾಪ್ತಿಯ ಸಮಗ್ರ ಶಿಶು ಅಭಿವೃದ್ಧಿ ಕಾರ್ಯಕ್ರಮದಡಿ 2017–18 ನೇ ಸಾಲಿನಲ್ಲಿ ಎರಡನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**

1. 2017–18ನೇ ಸಾಲಿನ ಆಯವ್ಯಯ ಸಂಪುಟ
2. ಸರ್ಕಾರದ ಆದೇಶ ಸಂಖ್ಯೆ: ಆಇ 3 ಬಿಆರ್‌ಎಸ್ 2017 ದಿನಾಂಕ:13.4.2017
3. ಸರ್ಕಾರದ ಆದೇಶ ಸಂಖ್ಯೆ: ಆಇ 269 ವೆಚ್ಚ 6/2017 ದಿನಾಂಕ:13.4.2017

**ಪ್ರಸ್ತಾವನೆ:**

ರಾಜ್ಯದ ತಾಲ್ಲೂಕು ಪಂಚಾಯತ್‌ಗಳ ವ್ಯಾಪ್ತಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕ ಶೀರ್ಷಿಕೆ 2235–00–101–0–61 ಲಿಂಕ್ ಡಾಕ್ಯುಮೆಂಟ್ ಲೆಕ್ಕ ಶೀರ್ಷಿಕೆ 2236–02–197–6–01ರಡಿ ಆಯವ್ಯಯದಲ್ಲಿ ಒದಗಿಸಿರುವ ಅನುದಾನವನ್ನು ಪರಿಶೀಲಿಸಿ ಅಗತ್ಯವಿರುವೆಡೆ ಹಾಗೂ ಉಳಿತಾಯವಾಗುವ ಜಿಲ್ಲೆಗಳ ಅನುದಾನದಲ್ಲಿ ಮೇಲೆ (2)ರಲ್ಲಿ ಓದಲಾದ ಮರು ಹೊಂದಾಣಿಕೆ ಆದೇಶದ ಮೂಲಕ ಅಗತ್ಯವಿರುವಡೆ ಅನುದಾನವನ್ನು ಉಳಿತಾಯದಿಂದ ಹಾಗೂ ಒಟ್ಟಾರೆಯಡಿ ಒದಗಿಸಿರುವ ಅನುದಾನ ರೂ.153146.98ಲಕ್ಷದಿಂದ 2017–18ನೇ ಸಾಲಿನ ಎರಡನೇ ಕಂತಿನ ಅನುದಾನ ಜುಲೈ 2017 ರಿಂದ ಸೆಪ್ಟೆಂಬರ್ 2017ರವರೆಗೆ ಒಟ್ಟು ರೂ.38442.09ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸುವ ಸಂಬಂಧ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 269 ವೆಚ್ಚ 6/2017 ದಿನಾಂಕ:10ನೇ ಅಕ್ಟೋಬರ್ 2017

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 6ರನ್ವಯ ರೂ.38442.09ಲಕ್ಷ (ರೂಪಾಯಿ ಮೂವತ್ತೆಂಟು ಸಾವಿರದ ನಾಲ್ಕು ನೂರ ನಲವತ್ತೆರಡು ಲಕ್ಷದ ಒಂಬತ್ತು ಸಾವಿರಗಳು ಮಾತ್ರ)ಗಳನ್ನು ಲೆಕ್ಕ ಶೀರ್ಷಿಕೆ 2236–02–197–6–01 (2235–00–101–0–61)ಅಡಿ ಜುಲೈ 2017 ರಿಂದ ಸೆಪ್ಟೆಂಬರ್ 2017ರವರೆಗಿನ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

ಬಿಡುಗಡೆಗೊಳಿಸಿದ ಈ ಅನುದಾನವನ್ನು ತಾಲ್ಲೂಕು ಪಂಚಾಯತ್ ನಿಧಿ–1ಕ್ಕೆ ಜಮೆ ಮಾಡಿಕೊಂಡು ನಿಯಮಾನುಸಾರ ವೆಚ್ಚ ಮಾಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

**(ಪುರುಷೋತ್ತಮ್ ಸಿಂಗ್ ಬಿ.ಹೆಚ್.)**
ವಿಶೇಷಾಧಿಕಾರಿ(ಜಿ.ಪಂ.),
ಆರ್ಥಿಕ ಇಲಾಖೆ

1. ಮಹಾಲೇಖಪಾಲರು (ಎ&ಇ), ಲೆಕ್ಕ ಪರಿಶೋಧನೆ 1&2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
3. ಆಯುಕ್ತರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
4. ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
5. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಪಟ್ಟ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು,
7. ಸಂಬಂಧಪಟ್ಟ ಜಿಲ್ಲಾ/ಉಪ ಖಜಾನೆ ಅಧಿಕಾರಿಗಳು
8. ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ